# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 302(2234)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಗೋವಿಂದ ರಾಜು(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್‌ರಾಜ್ ಸಚಿವರು

ವಿಷಯ : ಗ್ರಾಮೀಣ ಭಾಗದಲ್ಲಿ ನಿರ್ಮಿಸಿರುವ ನೀರಿನ ಓವರ್‌ಹೆಡ್ ಟ್ಯಾಂಕ್‌ಗಳ ಬಗ್ಗೆ

(ಅ) ಗ್ರಾಮೀಣ ಭಾಗದಲ್ಲಿ ನಿರ್ಮಿಸಿರುವ ನೀರಿನ ಓವರ್‌ಹೆಡ್ ಟ್ಯಾಂಕ್‌ಗಳು ಶಿಥಿಲವಾಗಿರುವುದು ಹಾಗೂ ನಿರುಪಯೋಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕೋಲಾರ ಜಿಲ್ಲೆಯಾದ್ಯಂತ ಶಿಥಿಲವಾಗಿರುವ ಮತ್ತು ನಿರುಪಯೋಗಿಯಾಗಿರುವ ಓವರ್‌ಹೆಡ್ ಟ್ಯಾಂಕ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ನೂತನ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲು ಸರ್ಕಾರದ ಕಾರ್ಯಕ್ರಮಗಳೇನಾದರು ಇದೆಯೇ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಈ) ಓವರ್‌ಹೆಡ್ ಟ್ಯಾಂಕ್‌ಗಳ ಬದಲು ನೂತನ ತಂತ್ರಜ್ಞಾನದ ಮೂಲಕ ಪ್ರೆಷರ್ ಪಂಪ್‌ಗಳಿಂದ ಕಾಲ ಕಾಲಕ್ಕೆ ನೀರು ಪೂರೈಸಿದ್ದಲ್ಲಿ, ಓವರ್‌ಹೆಡ್ ಟ್ಯಾಂಕ್‌ಗಳ ನಿರ್ಮಾಣದ ಮೊತ್ತವು ಸರ್ಕಾರಕ್ಕೆ ಉಳಿತಾಯವಾಗುವುದಿಲ್ಲವೇ; ಹಾಗಿದ್ದಲ್ಲಿ, ಪ್ರೆಷರ್ ಪಂಪ್‌ಗಳಿಂದ ನೀರು ಪೂರೈಸಲು ಸರ್ಕಾರ ಕ್ರಮಕೈಗೊಳ್ಳುವುದೇ, ಹಾಗಿದ್ದಲ್ಲಿ, ಇದನ್ನು ಎಂದಿನಿಂದ ಜಾರಿಗೆ ತರಲಾಗುವುದು?